# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿತು:ಸಾಮಾನ್ಯ:ಪ.ಪ್ರ:2020-21/ಖ.ಕೋಶ/2344 ದಿನಾಂಕ: 15.10.2020

## ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)

ವಿಷಯ: ವಿಶ್ವವಿದ್ಯಾನಿಲಯ ಪರೀಕ್ಷಾಂಗ ವಿಭಾಗಕ್ಕೆ ಅಗತ್ಯವಿರುವ ಪದವಿ ಪ್ರಮಾಣ ಪತ್ರಗಳ ಮೇಲೆ Variable Data ಮುದ್ರಣ ಮಾಡಲು ದರಪಟ್ಟಿ ಆಹ್ವಾನಿಸಿರುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15.10.2020 (ಕಂಡಿಕೆ-46).

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ 13ನೇ ವಾರ್ಷಿಕ ಘಟಿಕೋತ್ಸವದ ಸ್ನಾತಕ/ಸ್ನಾತಕೋತ್ತರ ಪದವಿ ಪ್ರಮಾಣ ಪತ್ರಗಳ ಮೇಲೆ Variable Data ಮುದ್ರಣ ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ. | ವಿವರ | ಪ್ರಮಾಣ | ಪ್ರತಿ ಒಂದು ಪ್ರಮಾಣ ಪತ್ರ ಮುದ್ರಣಕ್ಕೆ ಎಲ್ಲಾ ತೆರಿಗೆ ಸೇರಿದಂತೆ ದರ ಗಳನ್ನು ನಮೂದಿಸುವುದು. (Price Per Certificate Printing inclusive of all taxes) |
|---|---|---|---|
| 01 | **Variable Data Printing On Convocation Certificates Having a Specification of** 205 GSM Tear Resistant, Water Resistant blank certificate with Toner Fuse Technology, which self-Destroys when Tampered, with 8 security features. (High Resolution Security Border, Hot-Foil Stamping – Gold, Security Software Designed Purposeful Spelling Mistake, Penetrating Ink Numbering/ Security Numbering, Prismatic Printing, Micro Line Printing, Security software Designed Unique Dual Hidden Image, Positive and Negative Guiloohe Design). | 7000 | |

ಷರತ್ತು ಮತ್ತು ನಿಬಂದನೆಗಳು:

1. ಲಕೋಟೆಯ ಮೇಲೆ "ಪದವಿ ಪ್ರಮಾಣ ಪತ್ರಗಳ ಮೇಲೆ **Variable Data** ಮುದ್ರಣ" ಎಂದು ದರಪಟ್ಟಿಯಲ್ಲಿ ನಮೂದಿಸತಕ್ಕದ್ದು.
2. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.
3. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
4. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ಅಧಿಕೃತ ಮಾರಾಟಗಾರರು/ಸರಬರಾಜುದಾರರು/ತಯಾರಕರು ಆಗಿದ್ದಲ್ಲಿ ದಾಖಲೆಗಳನ್ನು ಲಗತ್ತಿಸುವುದು.
5. ಸರಬರಾಜು ಮಾಡಿದ 30 ದಿನಗಳೊಳಗೆ ಹುಂಡಿಯನ್ನು ಪಾವತಿಸಲಾಗುವುದು.
6. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 23.10.2020 ಪೂರ್ವಾಹ್ನ 11-00.
7. ದರಪಟ್ಟಿಯನ್ನು ದಿನಾಂಕ: 23.10.2020 ರಂದು ಮಧ್ಯಾಹ್ನ 12-00ಕ್ಕೆ ತೆರೆಯಲಾಗುವುದು. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-**572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರಿಯಾಗುವುದಿಲ್ಲ.

8. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
9. ವಿಶ್ವವಿದ್ಯಾನಿಲಯವು ಒಂದು ವೇಳೆ ತಮ್ಮ ದರಪಟ್ಟಿಯನ್ನು ತಾತ್ಕಾಲಿಕವಾಗಿ ಅಂಗೀಕರಿಸಿದ್ದಲ್ಲಿ ಮುದ್ರಣದ ಮಾದರಿಯನ್ನು ವಿಶ್ವವಿದ್ಯಾನಿಲಯವು ಸೂಚಿಸುವಂತಹ ವಿಭಾಗಕ್ಕೆ ಸಲ್ಲಿಸಿ ಅನುಮೋದನೆ ಪಡೆಯತಕ್ಕದ್ದು.
10. ತಮ್ಮ ದರಪಟ್ಟಿಯಲ್ಲಿ ಪ್ರತಿ ಪ್ರಮಾಣಕ್ಕೆ ದರಗಳನ್ನು ನಮೂದಿಸುವುದು. (ಎಲ್ಲಾ ತೆರಿಗೆ ಮತ್ತು ಸರಬರಾಜು ವೆಚ್ಚ ಒಳಗೊಂಡಿರತಕ್ಕದ್ದು.)
11. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
12. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
13. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:
1. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
3. ರಕ್ಷಣಾ ಪ್ರತಿ.